# ‘ಎನ್‌ಇಪಿಯಲ್ಲಿ ಹಿಂದಿ ಹೇರಿಕೆ ಇಲ್ಲ’




ಸುದ್ದಿಗೋಷ್ಠಿಯಲ್ಲಿ ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ಮಾತನಾಡಿದರು.

• **ಕನ್ನಡಪ್ರಭ ವಾರ್ತೆ** ಮಂಗಳೂರು

ರಾಷ್ಟ್ರೀಯ ಶಿಕ್ಷಣ ನೀತಿ(ಎನ್‌ಇಪಿ) ಮೂಲಕ ಶಿಕ್ಷಣ ಸಂಸ್ಥೆಗಳಲ್ಲಿ ಹಿಂದಿ ಹೇರಿಕೆಯ ಯಾವ ಉದ್ದೇಶವೂ ಇಲ್ಲ ಕೇಂದ್ರ ಸರ್ಕಾರಕ್ಕೆ ಇಲ್ಲ ಎಂದು ಶಿಕ್ಷಣ, ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ.

ಸುರತ್ಕಲ್ ಎನ್‌ಐಟಿಕೆಯಲ್ಲಿ ಶನಿವಾರ ಘಟಿಕೋತ್ಸವ ಹಾಗೂ ಕೇಂದ್ರೀಯ ಸಂಶೋಧನಾ ಸೌಲಭ್ಯ ಮತ್ತು ಸ್ಕೂಲ್ ಆಫ್ ಇಂಟರ್ ಡಿಸಿಪ್ಲಿನರಿ ಸ್ಟಡೀಸ್ ಕಟ್ಟಡ ಲೋಕಾರ್ಪಣೆಗೆ ಮುನ್ನ ಅವರು ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ನಮಗೆ ಎಲ್ಲ ಭಾಷೆಗಳೂ ಮುಖ್ಯ. ನಾವು ಎಲ್ಲ ಭಾಷೆಗಳನ್ನು ಗೌರವಿಸುತ್ತೇವೆ. ಎಲ್ಲ ಭಾಷೆಗಳಂತೆ ಹಿಂದಿಯೂ ಒಂದಾಗಿದೆ. ಎಲ್ಲ ರಾಜ್ಯಗಳೂ ಆಯಾ ರಾಜ್ಯದ ಸ್ಥಳೀಯ ಹಾಗೂ ಮಾತೃ ಭಾಷೆಗೆ ಆದ್ಯತೆ ನೀಡಲಿವೆ. ಮಧ್ಯಪ್ರದೇಶವು ಹಿಂದಿಯಲ್ಲೇ ವೈದ್ಯಕೀಯ, ಕಾನೂನು, ತಾಂತ್ರಿಕ ಶಿಕ್ಷಣ ನೀಡಲಿದೆ. ಅದು ಅವರವರಿಗೆ ಬಿಟ್ಟ ವಿಷಯ ಎಂದರು.

ದೇಶದ ಈಗ ರಾಷ್ಟ್ರೀಯ ಶಿಕ್ಷಣ ನೀತಿಯ ಮೂರನೇ ವರ್ಷದಲ್ಲಿದೆ. ಪ್ರಾಥಮಿಕ ಶಾಲೆಯಿಂದ ಸಂಶೋಧನಾ ತರಗತಿ ವರೆಗೆ ತೃಪ್ತಿಕರವಾಗಿ ಎನ್‌ಇಪಿ ಜಾರಿಯಾಗುತ್ತಿದೆ. ಎಲ್ಲ ರಾಜ್ಯಗಳೂ, ಶಿಕ್ಷಣ ಸಂಸ್ಥೆಗಳು ಇದನ್ನು ಸ್ವಾಗತಿಸಿವೆ ಎಂದು ಅವರು ಹೇಳಿದರು.

ಭಾರತೀಯ ಐಐಟಿ ಮತ್ತು ಐಐಐಟಿಗಳು ಕೇವಲ ಶಿಕ್ಷಣ ಸಂಸ್ಥೆಗಳು ಮಾತ್ರವಲ್ಲ, ಜ್ಞಾನದ ದೇಗುಲಗಳು. ಪ್ರಸಕ್ತ ಸುಮಾರು 10ರಷ್ಟು ದೇಶಗಳಲ್ಲಿ ಐಐಟಿಗಳ ಸ್ಥಾಪನೆಯಾಗಲಿವೆ. ಕೇಂದ್ರ ಶಿಕ್ಷಣ ಸಚಿವಾಲಯದ ನೆರವಿನಿಂದ ಹೊರದೇಶಗಳಲ್ಲಿ ಐಐಟಿಗಳನ್ನು ಸ್ಥಾಪನೆ ಮಾಡಲಾಗುತ್ತಿದೆ . ಭಾರತ ಇದಕ್ಕೆ ಮಾರ್ಗದರ್ಶನ ನೀಡಲಿದೆ ಎಂದರು.

ಎನ್‌ಐಟಿಕೆಯು ಶಿಕ್ಷಣ, ಸಂಶೋಧನೆ ಜತೆಗೆ ಎಲೆಕ್ಟ್ರಿಕ್ ಚಾರ್ಜಿಂಗ್ ಸೌಲಭ್ಯ, ಸೋಲಾರ್ ಪ್ಯಾನಲ್, ಎಲೆಕ್ಟ್ರಿಕ್ ಸ್ಕೂಟರ್ ಮೊದಲಾದ ನವೀಕರಿಸಬಹುದಾದ ಇಂಧನ ಬಳಕೆ ಮಾಡಿ, ಸುಸ್ಥಿರ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡುತ್ತಿದೆ ಎಂದು ಸಚಿವರು ಶ್ಲಾಘಿಸಿದರು.

kannda prabha, Date: 16/10/22. p, no- 03